# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1637(1982)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು

ವಿಷಯ : ಕಲ್ಲು, ಜಲ್ಲಿ ಮತ್ತು ಮರಳುಗಳ ಅಕ್ರಮ ಗಣಿಗಾರಿಕೆ ಬಗ್ಗೆ

(ಅ) ಕಟ್ಟಡ, ಕಲ್ಲು, ಜಲ್ಲಿ ಮತ್ತು ಮರಳುಗಳ ಬೇಡಿಕೆ ಹೆಚ್ಚುತ್ತಿರುವುದರ ಜೊತೆಗೆ ಗಣಿಗಾರಿಕೆ ಮಾಫಿಯಾ ಕೂಡಾ ಪ್ರಭಾವಿಯಾಗುತ್ತಿರುವ ವರದಿ ಸರ್ಕಾರದ ಗಮನಕ್ಕಿದೆಯೇ;

(ಆ) ಅನಧಿಕೃತ ಗಣಿಗಾರಿಕೆ ತಡೆಯುವಲ್ಲಿ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಕಾರಣ ಎಂಬ ವರದಿ ಇದ್ದು, ಈ ಬಗ್ಗೆ ಸರ್ಕಾರದ ಉತ್ತರವೇನು;

(ಇ) ರಾಜ್ಯದಲ್ಲಿನ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಮಂಜೂರಾದ ಹುದ್ದೆ, ಕಾರ್ಯನಿರ್ವಹಿಸುತ್ತಿರುವ ಮತ್ತು ಖಾಲಿ ಹುದ್ದೆಗಳೆಷ್ಟು; (ಮಾಹಿತಿ ನೀಡುವುದು)

(ಈ) 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು;

(ಉ) ಕಳೆದ 2 ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳೆಷ್ಟು?